ಕಾಲೇಜುಗಳ ಕಾಂಪೌಂಡ್ ನಿರ್ಮಾಣ

3184 (3665); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ಪ್ರಸಕ್ತ ಸಾಲಿನಲ್ಲಿ ಸರ್ಕಾರವು ಉನ್ನತ ಶಿಕ್ಷಣ ಕಾಲೇಜುಗಳ ಕಾಂಪೌಂಡ್ ನಿರ್ಮಾಣ ಹಾಗೂ ಅಭಿವೃದ್ಧಿಗಾಗಿ ನಿಗದಿಗೊಳಿಸಿರುವ ಅನುದಾನವೆಷ್ಟು; ಬಿಡುಗಡೆಗೊಳಿಸಿದ ಅನುದಾನ ಎಷ್ಟು;

ಆ) ಅಂತಹ ಎಷ್ಟು ಕಾಲೇಜುಗಳ ಕಾಮಗಾರಿಗಳನ್ನು ಕೈಗೊಳ್ಳುವ ಕುರಿತಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ (ವಿವರ ಒದಗಿಸುವುದು)

ಇ) ಅವುಗಳ ಪೈಕಿ ಅನುಮೋದನೆಗೊಂಡಿರುವ ಕಾಮಗಾರಿಗಳ ಪ್ರಸ್ತಾವನೆಗಳು ಯಾವುವು (ತಾಲ್ಲೂಕುವಾರು ಪೂರ್ಣ ವಿವರ ಒದಗಿಸುವುದು)

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಕಾಲೇಜು ಶಿಕ್ಷಣ ಇಲಾಖೆಯಡಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಕಾಂಪೌಂಡ್ ನಿರ್ಮಾಣ ಹಾಗೂ ಅಭಿವೃದ್ಧಿಗಾಗಿ ಒಟ್ಟು ರೂ. 8.00 ಕೋಟಿಗಳನ್ನು ನಿಗದಿಪಡಿಸಿದೆ ಹಾಗೂ ಕಟ್ಟಡ ಕಾಮಗಾರಿಗಳು ಹಾಗೂ ಇತರೇ ಅಗತ್ಯ ಮೂಲಭೂತ ಸೌಕರ್ಯ ಒದಗಿಸಲು ರೂ. 97.50 ಕೋಟಿಗಳನ್ನು ನಿಗದಿಪಡಿಸಲಾಗಿದೆ. ಕ್ರಿಯಾ ಯೋಜನೆ ಅನುಮೋದನಾ ಹಂತದಲ್ಲಿದ್ದು, ನಂತರ ಅನುದಾನ ಬಿಡುಗಡೆ ಮಾಡಲಾಗುವುದು.

ತಾಂತ್ರಿಕ ಶಿಕ್ಷಣ ಇಲಾಖೆಯ ಅಡಿ ಬರುವ ಕಾಲೇಜುಗಳ ಅಭಿವೃದ್ಧಿಗಾಗಿ ಲೆಕ್ಕ ಶೀರ್ಷಿಕೆ: 4202–02–104–1–01–436, 437, 438–ನಬಾರ್ಡ್ ಯೋಜನೆಯಡಿಯಲ್ಲಿ ನಿರ್ಮಿಸುತ್ತಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗಾಗಿ ರೂ. 5000.00 ಲಕ್ಷಗಳನ್ನು ಹಾಗೂ ಲೆಕ್ಕ ಶೀರ್ಷಿಕೆ:4202–02–104–1–03–3–386,422,423–ಯೋಜನೆಯಡಿ

ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗಾಗಿ ರೂ. 2000.00 ಲಕ್ಷಗಳನ್ನು ನಿಗದಿಗೊಳಿಸಲಾಗಿದೆ.

ಲೆಕ್ಕ ಶೀರ್ಷಿಕೆ: 4202–02–104–1–01–436–ಯೋಜನೆಯ ನಬಾರ್ಡ್ ಯೋಜನೆಯಡಿ ನಿರ್ಮಿಸುತ್ತಿರುವ 22 ಸರ್ಕಾರಿ ಪಾಲಿಟೆಕ್ನಿಕ್‌ಗಳ ಹೊಸ ಕಟ್ಟಡಗಳಿಗೆ ಮಾತ್ರ ಮೊದಲ ಕಂತಿನಲ್ಲಿ ರೂ. 1363.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಲೆಕ್ಕ ಶೀರ್ಷಿಕೆ: 4202–02–104–1–03–386–ಯೋಜನೆಯಡಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಮೊದಲ ಕಂತಿನಲ್ಲಿ ರೂ. 660.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಆ) ಕಾಲೇಜು ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಕಾಲೇಜುಗಳ ಭೂಸ್ವಾಧೀನ ಮತ್ತು ಕಟ್ಟಡಗಳ ದುರಸ್ತಿ ಹಾಗೂ ಇತರೆ ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನಾ ಹಂತದಲ್ಲಿದೆ.

ತಾಂತ್ರಿಕ ಶಿಕ್ಷಣ ಇಲಾಖೆಯಡಿ ಬರುವ 22 ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಟ್ಟಡಗಳ ನಿರ್ಮಾಣಕ್ಕೆ ರೂ. 4222.00 ಲಕ್ಷಗಳನ್ನು ಹಾಗೂ ಎಸ್.ಸಿ.ಪಿ/ಟಿಎಸ್.ಪಿ ಯೋಜನೆಯಡಿ 47 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ನಿರ್ಮಿಸಲಾಗಿರುವ ಹಾಸ್ಟೆಲ್‌ಗಳಿಗೆ ಅಡುಗೆ ಪಾತ್ರ ಮತ್ತು ಪೀಠೋಪಕರಣಗಳಿಗೆ 778.00 ಲಕ್ಷಗಳು ಮೀಸಲಾಗಿರುತ್ತದೆ. 10 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ 27 ಕಾಮಗಾರಿಗಳಿಗೆ ರೂ. 2000.00 ಲಕ್ಷಗಳನ್ನು ಮೀಸಲಿರಿಸಿದ್ದು, ಕ್ರಿಯಾ ಯೋಜನೆ ಅನುಮೋದನೆ ನೀಡಿದೆ.

ಇ) **ಕಾಲೇಜು ಶಿಕ್ಷಣ**

ಕ್ರಿಯಾ ಯೋಜನೆಯು ಅನುಮೋದನಾ ಹಂತದಲ್ಲಿದೆ.

ತಾಂತ್ರಿಕ ಶಿಕ್ಷಣ

22 ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಟ್ಟಡಗಳ ನಿರ್ಮಾಣಕ್ಕೆ ರೂ. 4222.00 ಲಕ್ಷಗಳನ್ನು ಹಾಗೂ ಎಸ್.ಸಿ.ಪಿ/ಟಿ.ಎಸ್.ಪಿ

ಯೋಜನೆಯಡಿ 47 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ನಿರ್ಮಿಸಲಾಗಿರುವ ಹಾಸ್ಟೆಲ್‌ಗಳಿಗೆ ಅಡುಗೆ ಪಾತ್ರೆ ಮತ್ತು ಪೀಠೋಪಕರಣಗಳಿಗೆ 778.00 ಲಕ್ಷಗಳು ಮೀಸಲಾಗಿರುತ್ತದೆ. ಎಸ್.ಸಿ.ಪಿ / ಟಿ.ಎಸ್.ಪಿ ಕ್ರಿಯಾ ಯೋಜನೆ ಅನುಮೋದನೆ ದೊರೆತ ನಂತರ ತಾಲ್ಲೂಕುವಾರು ವಿವರ ಹಂಚಿಕೆ ಮಾಡಲಾಗುತ್ತದೆ.

ಬೃಹತ್ ಪ್ರಮಾಣದ ವಸತಿ ನಿರ್ಮಾಣ ಯೋಜನೆ

3185 (3666); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ರಾಯಚೂರು ಜಿಲ್ಲೆಯಲ್ಲಿ ಬೃಹತ್ ಪ್ರಮಾಣದ ವಸತಿ ನಿರ್ಮಾಣ ಯೋಜನೆ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ವಸತಿ ಯೋಜನೆ ನಿರ್ಮಾಣಕ್ಕಾಗಿ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು;

ಇ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನ ಎಷ್ಟು;

ಈ) ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ವಸತಿ ಯೋಜನೆಗಳನ್ನು ಕೈಗೊಂಡು ನಿರ್ಮಾಣ ಮಾಡಲು ಸರ್ಕಾರವು ಎಷ್ಟು ಎಕರೆ ಜಮೀನನ್ನು ವಶಪಡಿಸಿಕೊಂಡಿದೆ (ಪೂರ್ಣ ಮಾಹಿತಿ ಒದಗಿಸುವುದು)

ಉ) ಪ್ರಸ್ತುತ ವಸತಿ ಯೋಜನೆ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ (ವಿಧಾನ ಸಭಾ ಕ್ಷೇತ್ರವಾರು ಪೂರ್ಣ ವಿವರ ನೀಡುವುದು)?

ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) **ಮತ್ತು** ಆ) ರಾಯಚೂರು ಜಿಲ್ಲೆಯಲ್ಲಿ ಬೃಹತ್ ಪ್ರಮಾಣದ ವಸತಿ ನಿರ್ಮಾಣ ಯೋಜನೆಗೆ ವಸತಿ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಸ್ವೀಕರಿಸಿರುವುದಿಲ್ಲ.

ಆದರೆ, ವಸತಿ ಇಲಾಖೆಯಿಂದ ವಸತಿರಹಿತ ಫಲಾನುಭವಿಗಳಿಗೆ ವಸತಿ